ಟ್ಟ ಸದರೀ ಮರಳೀಗವುಡನಿಗೆ 5–6ನೇ ಯವರು ಅಂಣನ ಮಕ್ಕಳು 1–2–3–4ನೇ ಯವರು ಮಕ್ಕಳು ಆಗಬೇಕೆಂಬ ಹಕ್ಕುದಾರೀ ಮೇಲೆ ತಿಪಟೂರು ತಾ॥ ಬಳವನೇರ್ಲ ಫಿರಕಾ ಹೊಸೂರು ಸ್ಥಳದ 1–2–3–4–5–6ನೇ ಯವರು ಡಿಟೋ ಗ್ರಾಮ ವಾಸಸ್ಥನಾಗಿ ಮೃತಪಟ್ಟ ಮರಳೀಗವುಡನ ಜಿಂದಗೀ ಬಗ್ಯಾಗಿ ಬರತಕ್ಕ 500 ರೂಪಾಯಿಗಳ ಸಾಲಗಳನ್ನು ವಸೂಲ್ಮಾಡುವದಕ್ಕೆ 1860ನೇ ಇಸವೀ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ 1–2–3–4–5–6ನೇ ಯವರುಗಳ ಅರ್ಜೀಯನ್ನು 1884ನೇ ಇಸವೀ ಮಾರ್ಚೀ ತಿಂಗಳು ತಾರೀಖು 5ರಲ್ಲು ಕೇಳಿ ಸರಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಮರಳೀಗವುಡನ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

1884ನೇ ಇಸವಿ ಫಿಬ್ರವರೀ ತಿಂಗಳು 6ನೇ ತಾರೀಖಿನಲ್ಲಿ ಕೋರ್ಟು ಮೊಹರ್ ಮತ್ತು ನಮ್ಮದಸ್ತಖತ್ತೊಡನೆ ಕೊಡೋಣಾಗಿಧೆ.

1884ನೇ ಇಸವಿ ಅರ್ಜೀ ನಂಬರ್ 11—3.

ಮೃತಪಟ್ಟ ನಂಜುಂಡಶೆಟ್ಟಿ ಯೆಂಬವನ ಆಸ್ತೀ ವಿಷಯದಲ್ಲಿ—

ಅರ್ಜೀದಾರ 1ನೇ ನಂಜಯ್ಯ, 2ನೇ ಮರಳಯ್ಯ, 3ನೇ ಗುರುನಂಜಯ್ಯ, ಇವರಗಳು ಮೈನರ್ ಗಾರ್ಡಿಯರ್ ತಾಯಿ ಈರಮ್ಮ. ಮೃತಪಟ್ಟ ಸದರೀ ನಂಜುಂಡಶೆಟ್ಟಿ ಯೆಂಬವನಿಗೆ ಹೆಂಡತಿ ಮಕ್ಕಳು ಆಗಬೇಕೆಂಬ ಹಕ್ಕುದಾರೀ ಮೇಲೆ ತಿಪಟೂರು ತಾಲ್ಲೂಕು ಸೂರನಹಳ್ಳಿ ಸ್ಥಳದ ಡಿಟೋ ಮೈನರ್‌ಗಳ ತಾಯಿ ಈರಮ್ಮ, ಡಿಟೋ ತಾಲ್ಲೂಕು ವೆಂಕಟಗಿರಿಯನಹಳ್ಳಿ ವಾಸಸ್ಥನಾಗಿ ಮೃತಪಟ್ಟ ನಂಜುಂಡಶೆಟ್ಟಿಯ ಜಿಂದಗಿ ಬಗ್ಯಾಗಿ ಬರತಕ್ಕ 700 ರೂಪಾಯಿಗಳ ಸಾಲಗಳನ್ನು ವಸೂಲ್ಮಾಡುವಕ್ಕೆ 1860ನೇ ಇಸವೀ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿ ಇರುತ್ತಾಳೆ.

ಸದರೀ ದರಖಾಸ್ತುದಾರಳಾದ ಈರಮ್ಮನ ಅರ್ಜಿಯನ್ನು 1884ನೇ ಇಸವಿ ಮಾರ್ಚೀ ತಿಂಗಳು ತಾರೀಖು 12ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ನಂಜುಂಡಶೆಟ್ಟಿಯ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿಇಧೆ.

1884ನೇ ಇಸವಿ ಫಿಬ್ರವರೀ ತಿಂಗಳು 9ನೇ ತಾರೀಖಿನಲ್ಲಿ ಕೋರ್ಟು ಮೊಹರ್ ಮತ್ತು ನಮ್ಮದಸ್ತಖತ್ತೊಡನೆ ಕೊಡೋಣಾಗಿಧೆ.

ಸಿ. ಕೈಸ್,
ಸಬ್ ಜಡ್ಜ್.

ಮೈಸೂರು ಡಿಸ್ಟ್ರಿಕ್ಟು.

ಮೈಸೂರು ಡಿಸ್ಟ್ರಿಕ್ಟು ಜಡ್ಜ್‌ರೀಯವರ ಕೋರ್ಟಿನಲ್ಲಿ.

1884ನೇ ಇಸವಿ ಅರ್ಜೀ ನಂಬರ್ 27.

ಮೃತಪಟ್ಟ ಸುಬ್ಬರಾಯಶೆಟ್ಟಿ ಆಸ್ತೀ ವಿಷಯದಲ್ಲಿ—

ಅರ್ಜೀದಾರು ರಾಮಕೃಷ್ಣಶೆಟ್ಟಿಯು, ಮೃತಪಟ್ಟ ಸದರೀ ಸುಬ್ಬರಾಯಶೆಟ್ಟಿಗೆ ಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ಯಡತೊರೆ ತಾಲ್ಲೂಕು ಕೊಣನೂರು ಸ್ಥಳದ ಸದರೀ ರಾಮಕೃಷ್ಣಶೆಟ್ಟಿಯು, ಸದರೀ ವಾಸಸ್ಥರಾಗಿ ಮೃತಪಟ್ಟ ಸುಬ್ಬರಾಯಶೆಟ್ಟಿಯ ಜಿಂದಗಿ ಬಗ್ಯಾಗಿ ಬರತಕ್ಕ 500 ರೂಪಾಯಿಗಳ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರನಾದ ರಾಮಕೃಷ್ಣಶೆಟ್ಟಿಯ ಅರ್ಜೀಯನ್ನು 1884ನೇ ಇಸವಿ ಫಿಬ್ರವರೀ ತಿಂಗಳು ತಾರೀಖು 28ರಲ್ಲು ಮೈಸೂರು ಮೊಕ್ಕಾಂ ಈ ಕೋರ್ಟಿನಲ್ಲಿ ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಸುಬ್ಬರಾಯಶೆಟ್ಟಿ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

132

1884ನೇ ಇಸವಿ ಅರ್ಜೀ ನಂಬರ್ 30.

ಮೃತಪಟ್ಟ ಕೆಂಪೇಗವುಡನ ಆಸ್ತೀ ವಿಷಯದಲ್ಲಿ—

ಅರ್ಜೀದಾರ ಚಿಕ್ಕೇಗವುಡನು, ಮೃತಪಟ್ಟ ಸದರೀ ಕೆಂಪೇಗವುಡನಿಗೆ ಯರಡನೆ ಮಗ ಆಗಬೇಕೆಂಬ ಹಕ್ಕುದಾರಿ ಮೇಲೆ ನಾಗಮಂಗಲ ತಾಲ್ಲೂಕು ಬಿಂಡಿಗನವಲೆ ಸ್ಥಳದ ಚಿಕ್ಕೇಗವುಡನು, ಡಿಟೋ ವಾಸಸ್ಥನಾಗಿ ಮೃತಪಟ್ಟ ಕೆಂಪೇಗವುಡನ ಜಿಂದಗಿ ಬಗ್ಯಾಗಿ ಬರತಕ್ಕ 500 ರೂಪಾಯಿಗಳ ಸಾಲವನ್ನು ವಸೂಲ್ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿ ಇರುತ್ತಾನೆ.

ಸದರೀ ದರಖಾಸ್ತುದಾರನಾದ ಚಿಕ್ಕೇಗವುಡನ ಅರ್ಜಿಯನ್ನು 1884ನೇ ಇಸವಿ ಫಿಬ್ರವರೀ ತಿಂಗಳು ತಾರೀಖು 28ರಲ್ಲು ಮೈಸೂರು ಮೊಕ್ಕಾಂಈ ಕೋರ್ಟಿನಲ್ಲಿ ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಕೆಂಪೇಗವುಡನ ಆಸ್ತಿಗೆ ಹಕ್ಕುದಾರರಾದ ವಿಸಿಸ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1884ನೇ ಇಸವಿ ಜನವರೀ ತಿಂಗಳು 25ನೇ ತಾರೀಖಿನಲ್ಲಿ ಕೋರ್ಟು ಮೊಹರ್‌ನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

1884ನೇ ಇಸವೀ ಅರ್ಜೀ ನಂಬರ್ 26.

ಮೃತಪಟ್ಟ ಕೃಷ್ಣಪ್ಪನ ಆಸ್ತಿ ವಿಷಯದಲ್ಲಿ—

ಅರ್ಜೀದಾರಳು ಸುಬ್ಬಮ್ಮ ಮೃತಪಟ್ಟ ಸದರೀ ಕೃಷ್ಣಪ್ಪನಿಗೆ ಹೆಂಡತಿ ಆಗಬೇಕೆಂಬ ಹಕ್ಕುದಾರಿ ಮೇಲೆ ಅತ್ತಿಕುಪ್ಪಾ ತಾಲ್ಲೂಕು ಕನ್ನಂಬುಡಿ ಸ್ಥಳದ ಸುಬ್ಬಮ್ಮನು, ಡಿಟೋ ವಾಸಸ್ಥನಾಗಿ ಮೃತಪಟ್ಟ ಕೃಷ್ಣಪ್ಪನ ಜಿಂದಗೀ ಬಗ್ಯಾಗಿ ಬರತಕ್ಕ 800 ರೂಪಾಯಿನ ಸಾಲಗಳನ್ನು ವಸೂಲ್ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾಳೆ.

ಸದರೀ ದರಖಾಸ್ತುದಾರಳಾದ ಸುಬ್ಬಮ್ಮನ ಅರ್ಜೀಯನ್ನು 1884ನೇ ಇಸವಿ ಫಿಬ್ರವರೀ ತಿಂಗಳು ತಾರೀಖು 28ರಲ್ಲು ಮೈಸೂರು ಮೊಕ್ಕಾಂಈ ಕೋರ್ಟಿನಲ್ಲಿ ಕೇಳಿ ಸರ್ಟಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಸದರೀಕೃಷ್ಣಪ್ಪನ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರಿರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1884ನೇ ಇಸವಿ ಫಿಬ್ರವರೀ ತಿಂಗಳು 1ನೇ ತಾರೀಖಿನಲ್ಲಿ ಕೋರ್ಟು ಮೊಹರ್‌ನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

1884ನೇ ಇಸವಿ ಅರ್ಜೀ ನಂಬರ್ 45.

ಮೃತಪಟ್ಟ ವೆಂಕಟಸುಬ್ಬಯ್ಯನ ಆಸ್ತಿ ವಿಷಯದಲ್ಲಿ—

ಅರ್ಜೀದಾರ ವೆಂಕಟರಾಮಯ್ಯ ಮೈನರ್ ಗಾರ್ಡಿಯರ್ ಮತ್ತು ಚಿಕ್ಕಪ್ಪ ಗಿರಿಅಪ್ಪಯ್ಯ, ಮೃತಪಟ್ಟ ಸದರೀ ವೆಂಕಟಸುಬ್ಬಯ್ಯನಿಗೆ ಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ಮಂಡ್ಯ ತಾಲ್ಲೂಕು ಸಾತನೂರಲ್ಲಿರುವ ಸದರೀ ವೆಂಕಟರಾಮಯ್ಯ, ಸದರೀ ವಾಸಸ್ಥನಾಗಿ ಮೃತಪಟ್ಟ ವೆಂಕಟಸುಬ್ಬಯ್ಯನ ಜಿಂದಗಿ ಬಗ್ಯಾಗಿ ಬರತಕ್ಕ 800 ರೂಪಾಯಿಗಳ ಸಾಲಗಳನ್ನು ವಸೂಲ್ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ವೆಂಕಟರಾಮಯ್ಯನ ಅರ್ಜಿಯನ್ನು 1884ನೇ ಇಸವಿ ಮಾರ್ಚೀ ತಿಂಗಳು ತಾರೀಖು 26ರಲ್ಲು ಮೈಸೂರು ಮೊಕ್ಕಾಂ ಈ ಕೋರ್ಟಿನಲ್ಲಿ ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ವೆಂಕಟಸುಬ್ಬಯ್ಯನ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1884ನೇ ಇಸವಿ ಅರ್ಜೀ ನಂಬರ್ 50.

ಮೃತಪಟ್ಟ ಭೀಮಕೇನಾಚಾರ್ಯರ ಆಸ್ತೀ ವಿಷಯದಲ್ಲಿ—

ಅರ್ಜೀದಾರ ವೆದವ್ಯಾಸಾಚಾರ್ಯರು, ಮೃತಪಟ್ಟ ಸದರೀ ಭೀಮಕೇನಾಚಾರ್ಯರಿಗೆ ದೊಡ್ಡಪ್ಪನ ಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ಜೆಂಗಳೂರಲ್ಲಿರುವ ಸುಪತಿ ಅನಂತಾಚಾರ್ಯರ ಮಕ್ಕಳು ವೇದವ್ಯಾಸಾಚಾರ್ಯರು, ಶ್ರೀರಂಗಪಟ್ಟಣ ವಾಸಸ್ಥನಾಗಿ ಮೃತಪಟ್ಟ ಭೀಮಕೇನಾಚಾರ್ಯರ ಜಿಂದಗೀ ಬಗ್ಯಾಗಿ ಬರತಕ್ಕ 330 ರೂಪಾಯಿಗಳ ಸಾಲಗಳನ್ನು ವಸೂಲ್ಮಾಡುವದಕ್ಕೆ 1860ನೇ ಇಸವೀ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ವೇದವ್ಯಾಸಾಚಾರ್ಯರ ಅರ್ಜೀಯನ್ನು 1884ನೇ ಇಸವಿ ಮಾರ್ಚೀ ತಿಂಗಳು ತಾರೀಖು 26ರಲ್ಲು ಮೈಸೂರು ಮೊಕ್ಕಾಂ ಈ ಕೋರ್ಟಿನಲ್ಲಿ ಕೇಳಿ ಸರಟಿಫಿಕೇಟ್ ಪಡೆಯುತಕ್ಕ ಬಾಧ್ಯತೆಯನ್ನು ವಿಮರ್ಶೆಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಭೀಮಶೇನಾಚಾರ್ಯರ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1884ನೇ ಇಸವಿ ಫಿಬ್ರವರೀ ತಿಂಗಳು 2ನೇ ತಾರೀಖಿನಲ್ಲಿ ಕೋರ್ಟು ಮೊಹರ್ ಮತ್ತು ಸಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ವಿ. ಎ. ನರಸಿಹ್ಮಯ್ಯಂಗಾರ್,
ಡಿಸ್ಟ್ರಿಕ್ಟು ಜಡ್ಜ.

ತಾರೀಖು 30ನೇ ಜನವರೀ 1884.

ಇದರಿಂದ ತಿಳಿಯಪಡಿಸುವದೇನೆಂದರೆ, ಮಳವಳ್ಳಿ ಸಬ್ ರಿಜಿಸ್ಟ್ರೀ ಆಫೀಸಿನಲ್ಲಿ ಬೇವಾರಸಾಗಿ ಇರತಕ್ಕ ಕೆಳಗೆ ವಿವರಿಸೋಣಾದ ದಸ್ತೈವಜನ್ನು ಹಾಜರ್ಮಾಡಿದವನೆ ಆಗಲಿ ಅಥವಾ ವಾಪಸುಪಡಿಯಲಿಕ್ಕೆ ಅವನಿಂದ ಕ್ರಮವಾಗಿ ಅಧಿಕಾರ ಹೊಂದಿದ ಮುತಾಲೀಕ ಯಾ ಹಕ್ಕುದಾರನೆ ಆಗಲಿ ಈ ನೋಟೀಸ್ ತಾರೀಖು ಲಾಗಾಯಿತು ಒಂದು ತಿಂಗಳವಳಗಾಗಿ ಸಬ್ ರಿಜಸ್ಟ್ರಾರ್ ರೂಬರೂ ಹಾಜರಾಗಿ ಅದನ್ನು ವಾಪಸ್ ತೆಗದುಕ್ಕೊಳ್ಳಬೇಕು, ತಪ್ಪಿದರೆ 1877ನೇ ಇಸವಿ 3ನೇ ನಂಬರು ರಿಜಿಸ್ಟ್ರೇಷನ್ ಆಕ್ಟು '85ನೇ ಸೆಕ್ಷನ್' ಅನುಸರಿಸಿ ಅದು ನಾಶಪಡಿಸೆಲ್ಪಡುವದು.

ನಂಬರು.	ದಸ್ತಾವೇಜು ಬರದುಕೊಟ್ಟವರ ಹೆಸರು ಮತ್ತು ವಾಸಸ್ಥಳ.	ದಸ್ತಾವೇಜು ಬರಿಸಿಕೊಂಡವರ ಹೆಸರು ಮತ್ತು ವಾಸಸ್ಥಳ.	ರಿಜಿಸ್ಟ್ರಿಗೆ ಪೂರೈಸಿರುವ ತಾರೀಖು.	ರಿಜಿಸ್ಟ್ರಿಯ ತಾರೀಖು	ದಸ್ತಾವೇಜಿನ ಸ್ವಭಾವ ಮತ್ತು ಕಿಮ್ಮತ್ತು.
213 81—82	ಪೂರಿಗಾಲಿ ಕಸಬೇಲಿರುವ ವೆಂಕಟರಮಣಾಚಾರಿ ಮಗ ತಿಮ್ಮಪ್ಪ, ಕೃಷ್ಣಪ್ಪಬ್ಯಾಹ್ಮಣ	ಪೂರಿಗಾಲಿ ಹೋಬಳಿ ಮೈಕಿ ಮರಳಹಳ್ಳಿ ಗ್ರಾಮದಾಖಲೆ ಕೃಷ್ಣಯ್ಯಂಗಾರ್ ಹುಂಡೀಲಿರುವ ವೆಂಕಟನರಸಿಂಹಾಚಾರ್ ಮಗ ಕೃಷ್ಣಾಚಾರಿ	20—1—82	20—1—82	(50) ರೂಪಾಯಿನ ಮನೆ ಆಧಾರ ಪತ್ರ.

ಅಬ್ದುಲ್ ಖಾದರ್, ಕೆ. ಬಿ, ರಿಜಿಸ್ಟ್ರಾರ್.

ತಾರೀಖು 1ನೇ ಫಿಬ್ರವರೀ 1884.

ಇದರಿಂದ ತಿಳಿಸುವದೇನೆಂದರೆ, ಮೈಸೂರು ಜೈಲ್‌ನಲ್ಲಿ ಖೈದು ಮಾಡಲ್ಪಟ್ಟಿರುವ ಖೈದಿಗಳ ಉಪಯೋಗದ ಬಗ್ಗೆ ಸ್ರ 1884ನೇ ಇಸವಿ ಏಪ್ರಿಲ್ ಗುರ್ವೇ ತಾರೀಖು ಮೊದಲು 1885ನೇ ಮಾರ್ಚೀ 31ನೇ ತಾರೀಖುವರಿಗೆ ಎರಡು ದಿನಗಳೂ ಸೇರಿ ಬೇಕಾದ ಆಹಾರ ವಗೈರೇ ದರೋಬಸ್ತು ಜಿನಸುಗಳನ್ನೂ ಕಂಟ್ರಾಕ್ಟು ಮೂಲಕ ಸರಬರಾಯಿ ಮಾಡುವ ಬಗ್ಗೆ ಬರುವ ಬಂದು ಮೊಹರ್ಲ್ಪಟ್ಟ ದರಖಾಸ್ತುಗಳನ್ನು ಮೈಸೂರು ಜೈಲ್ ಸೂಪರ್‌ಟೆಂಡೆಂಟರವರು, ಸ್ರ 1884ನೇ ಇಸವಿ ಮಾರ್ಚೀ 15ನೇ ತಾರೀಖುವರಿಗೆ ತೆಗದುಕೊಳ್ಳುವರು.

2. ಸದರೀ ತಾರೀಖು ತರುವಾಯ ಯಾವ ದರಖಾಸ್ತುಗಳೂ ತೆಗದುಕೊಳ್ಳಲ್ಪಡಲಾರದು.

3. "ಮೈಸೂರು ಜೈಲ್‌ಗಾಗಿ ಆಹಾರ ಪದಾರ್ಥಗಳ ಸರಬರಾಯಿ ಬಗ್ಗೆ ದರಖಾಸ್ತುಗಳು" ಯಂಬದಾಗಿ ವಿಳಾಸ ಬರೆಯಲ್ಪಡತಕ್ಕದ್ದು.

4. 500 ರೂಪಾಯಿಗಳು ನಗದಾಗಿ ಅಥವಾ ಕರೆನ್ಸೀ ನೋಟುಗಳ ಮೂಲಕ ಡಿಪಾಜಿಟ್‌ನೀಗೆ ಕಳುಹಿಸಲ್ಪಟ್ಟ ಹೊರತು ಯಾವ ದರಖಾಸ್ತುಗಳೂ ತೆಗದುಕೊಳ್ಳಲ್ಪಡಲಾರವು.

5. ದರಖಾಸ್ತುಗಳು ಮೈಸೂರು ಜೈಲ್ ಆಫೀಸಿನಲ್ಲಿ, ಹಾಜರಾಗಲಿಕ್ಕೆ ಇಷ್ಟವುಳ್ಳ ದರಖಾಸ್ತುದಾರರ ರೂಬರೂ ಮೇಲ್ಕಂಡ ತಾರೀಖಿನೊಳಗೆ ಪ್ರಾತಃಕಾಲ 7 ಘಂಟೆಗೆ ಮೈಸೂರು ಜೈಲ್ ಸೂಪರ್‌ಟೆಂಡೆಂಟರಿಂದ ಖುಲ್ಲಾ ಮಾಡಲ್ಪಡುವವು.

6. ದರೋಬಸ್ತು ದರಖಾಸ್ತುಗಳಲ್ಲಿಯೂ, ಈ ಕೆಳಗೆ ನಮೂದಿಸುವ ತರಗತಿಯ ಪ್ರತಿ ಖೈದಿಗೂ ದಿನ ಒಂದಕ್ಕೆ ಆಗತಕ್ಕ ದರವು ನಮೂದಿಸಲ್ಪಡತಕ್ಕದ್ದು.